# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತನಾಲ್ಕನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ:12ನೇ ಡಿಸೆಂಬರ್, 2024**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

## 02. ಶೂನ್ಯವೇಳೆ ಪ್ರಸ್ತಾವಗಳು

## 03. ವರದಿಗಳನ್ನೊಪ್ಪಿಸುವುದು

ಅ. **ಶ್ರೀ ರಾಜೇಂದ್ರ ರಾಜಣ್ಣ (ಸದಸ್ಯರು, ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ)** ಅವರು 2024-25ನೇ ಸಾಲಿನ ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಮೊದಲನೇ ವರದಿಯನ್ನೊಪ್ಪಿಸುವುದು.

ಆ. **ಶ್ರೀಮತಿ ಉಮಾಶ್ರೀ (ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಸಾರ್ವಜನಿಕ ಉದ್ಯಮಗಳ ಸಮಿತಿ)** ಅವರು ಕರ್ನಾಟಕ ವಿಧಾನ ಮಂಡಲದ ಸಾರ್ವಜನಿಕ ಉದ್ಯಮಗಳ ಸಮಿತಿಯ 137ನೇ ಹಾಗೂ 138ನೇ ವರದಿಗಳನ್ನೊಪ್ಪಿಸುವುದು.

ಇ. **ಶ್ರೀ ಶರಣಗೌಡ ಬಯ್ಯಾಪುರ(ಸದಸ್ಯರು, ಕರ್ನಾಟಕ ವಿಧಾನಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ)**ಅವರು ಕರ್ನಾಟಕ ವಿಧಾನಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ 38ನೇ ವರದಿಯನ್ನೊಪ್ಪಿಸುವುದು.

## 04. ಚುನಾವಣಾ ಪ್ರಸ್ತಾವಗಳು

**ಶ್ರೀ ಎನ್.ಎಸ್. ಬೋಸ್‌ರಾಜು (ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು) ಅವರು:-**

ಅ) ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸೆನೆಟ್‌ಗೆ ಅಧಿನಿಯಮ 1994ರ ಕಲಂ 21(1)(viii)ರ ರೀತ್ಯಾ ವಿಧಾನ ಪರಿಷತ್ತಿನ ಒಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಪ್ರಸ್ತಾವವನ್ನು ಮಂಡಿಸುವುದು.

ಆ) ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಪ್ರಶಾಸನ ಸಭೆಗೆ ಅಧಿನಿಯಮ 2009ರ ಪ್ರಕರಣ 20(ಐ)ರ ರೀತ್ಯಾ, ವಿಧಾನ ಪರಿಷತ್ತಿನ ಒಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಪ್ರಸ್ತಾವವನ್ನು ಮಂಡಿಸುವುದು.

## 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಶಾಂತರಾಮ್ ಬುಡ್ನ ಸಿದ್ಧಿ** ಅವರು ಕರ್ನಾಟಕ ಅರಣ್ಯ ಕಾಯ್ದೆ 1962 ಕಲಂ 28ರ ಅಡಿ ದಿನಾಂಕ:27.04.1978ರ ಪೂರ್ವದಲ್ಲಿ ಅರಣ್ಯ ಅತಿಕ್ರಮಣ ಪ್ರದೇಶವನ್ನು ಸಕ್ರಮಗೊಳಿಸಲಾಗಿದ್ದಾಗ್ಯೂ disforest donatory ಜಾರಿಯಾಗದಿರುವುದರಿಂದ ರೈತರು ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗಿರುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

02. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಬಾಗಲಕೋಟೆ ಮತ್ತು ವಿಜಯಪುರ ಅವಳಿ ಜಿಲ್ಲೆಗಳಲ್ಲಿನ ಪ್ರವಾಸಿ ತಾಣಗಳಾದ ಬಾದಾಮಿ, ಬನಶಂಕರಿ, ಐಹೊಳೆ, ಪಟ್ಟದಕಲ್ಲು, ಗೋಲಗುಂಬಜ್, ಶಿವನ ಮಂದಿರ, ಆಲಮಟ್ಟಿ ಜಲಾಶಯದ ಹಿನ್ನೀರಿನಲ್ಲಿ ಬಗೆ ಬಗೆಯ ಪಕ್ಷಿಯ ತಾಣಗಳನ್ನು ನಿರ್ಮಿಸಿ ಅಭಿವೃದ್ಧಿಪಡಿಸುವ ಕುರಿತು ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

01. **ಡಾ: ತಳವಾರ್ ಸಾಬಣ್ಣ** ಅವರು ಅತ್ಯಂತ ಹಿಂದುಳಿದ ಜಾತಿಗಳನ್ನು ಒಳಗೊಂಡ ಪ್ರವರ್ಗ-1 ಗುಂಪಿಗೆ ಜನಸಂಖ್ಯೆ, ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಹಿನ್ನಲೆ ಪರಿಗಣಿಸದೆ ಅವೈಜ್ಞಾನಿಕವಾಗಿ ಮೀಸಲಾತಿ ಪ್ರಮಾಣವನ್ನು ನಿಗದಿಪಡಿಸಿರುವ ಕುರಿತು ಪ್ರಸ್ತಾಪಿಸುವುದು.

02. **ಶ್ರೀ ಬಿ.ಕೆ. ಹರಿಪ್ರಸಾದ್** ಅವರು ಉಡುಪಿ ಜಿಲ್ಲೆ ಮಲ್ಪೆಯ ಮಹಾಲಕ್ಷ್ಮಿ ಕೋ-ಆಪರೇಟಿವ್ ಬ್ಯಾಂಕಿನಲ್ಲಿ ನಕಲಿ ದಾಖಲೆಗಳನ್ನು ಸೃಷ್ಟಿಸಿ ಅವ್ಯವಹಾರ ಎಸಗಿರುವ ಕುರಿತು ಪ್ರಸ್ತಾಪಿಸುವುದು.

03. **ಶ್ರೀ ಸಿ.ಎನ್. ಮಂಜೇಗೌಡ** ಅವರು ರಾಜ್ಯದಲ್ಲಿ ಅವ್ಯಾಹತವಾಗಿ ನಡೆಯುತ್ತಿರುವ ಸೈಬರ್ ವಂಚನೆ ಪ್ರಕರಣಗಳನ್ನು ತಡೆಯಲು ರಾಜ್ಯ ಸರ್ಕಾರ ಕಠಿಣ ಕ್ರಮ ಕೈಗೊಳ್ಳುವ ಕುರಿತು ಪ್ರಸ್ತಾಪಿಸುವುದು.

## 07. ಉತ್ತರ ಕರ್ನಾಟಕ ಭಾಗದ ನೀರಾವರಿ ಯೋಜನೆಗಳ ಅನುಷ್ಠಾನದ ಬಗ್ಗೆ ವಿಶೇಷ ಚರ್ಚೆ

**08. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಕುರಿತು ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ**

**ಶ್ರೀಯುತರುಗಳಾದ:-**

| | |
|---|---|
| **ಮಾನ್ಯ ವಿರೋಧ ಪಕ್ಷದ ನಾಯಕರಾದ ಛಲವಾದಿ ಟಿ. ನಾರಾಯಣಸ್ವಾಮಿ ಮತ್ತು ಮಾನ್ಯ ಶಾಸಕರುಗಳಾದ ಶಶೀಲ್ ಜಿ. ನಮೋಶಿ, ಎಸ್.ಎಲ್. ಭೋಜೇಗೌಡ, ಡಿ.ಎಸ್. ಅರುಣ್, ಬಿ.ಜಿ. ಪಾಟೀಲ್, ಎನ್. ರವಿಕುಮಾರ್ ಹಾಗೂ ಇತರರು** | ರಾಜ್ಯದಲ್ಲಿ ವಕ್ಫ್ ಆಸ್ತಿ ವಿವಾದದಿಂದ ರೈತರು ಮತ್ತು ಸಾರ್ವಜನಿಕರಲ್ಲಿ ಆತಂಕ ಮೂಡಿರುವ ಕುರಿತು |

**09. ಅರ್ಧ ಗಂಟೆ ಕಾಲಾವಧಿ ಚರ್ಚೆ**

ಅತಿಥಿ ಶಿಕ್ಷಕರ/ಉಪನ್ಯಾಸಕರ ವೇತನ ಪರಿಷ್ಕರಣೆ ಮಾಡುವ ಕುರಿತು ದಿನಾಂಕ:09.12.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:02(66)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಡಾ: ಧನಂಜಯ ಸರ್ಜಿ** ಅವರಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
**www.kla.kar.nic.in/council/council.htm**